## ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿಇ/ಪರೀಕ್ಷೆ/ಮಾರ್ಚ್-15/2014-15

ನಿರ್ದೇಶಕರ ಕಚೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಮಲ್ಲೇಶ್ವರಂ 18ನೇ ಕ್ರಾಸ್,
ಸಂಪಿಗೆ ರಸ್ತೆ, ಬೆಂಗಳೂರು-12.
ದಿನಾಂಕ 16-03-2015.

## ಸು ತ್ತೋ ಲೆ

ಪದವಿ ಪೂರ್ವ ವಾರ್ಷಿಕ ಪರೀಕ್ಷೆಯು ನಡೆಯುತ್ತಿದ್ದು ಕೆಲವೊಂದು ಭಾಗಗಳಲ್ಲಿ ಸ್ಥಳೀಯ ಅಧಿಕಾರಿಗಳು ಉಪನ್ಯಾಸಕರೊಂದಿಗೆ ಪರೀಕ್ಷೆ ಅಕ್ರಮಗಳನ್ನು ನಡೆಸುತ್ತಿರುವುದು ನನ್ನ ಗಮನಕ್ಕೆ ಬಂದಿರುತ್ತವೆ. ಕೆಲವು ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಮೇಲ್ವಿಚಾರಕರು (Room Invigilation) ಹಾಗು ಎಲ್ಲ ಪರೀಕ್ಷಾ ಕೇಂದ್ರದಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಮೊಬೈಲ್‌ಗಳ ಮೂಲಕ ವಾಟ್ಸ್ ಅಪ್‌ನಲ್ಲಿ ಪ್ರಶ್ನೆಪತ್ರಿಕೆಯ ಪ್ರತಿಯನ್ನು ಕಳುಹಿಸುತ್ತಿರುವುದು ನನ್ನ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ, ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್‌ಗಳನ್ನು ಪರೀಕ್ಷಾ ಕೇಂದ್ರಗಳಲ್ಲಿ ಕಡ್ಡಾಯವಾಗಿ ಬಳಸದೇ ಇರಲು ಸೂಕ್ತ ನಿರ್ದೇಶನವನ್ನು ನೀಡಲು ಹಾಗೂ ಒಂದು ವೇಳೆ ಮೊಬೈಲ್ ಅನ್ನು ಪರೀಕ್ಷಾ ಕೇಂದ್ರಗಳಿಗೆ ಉಪನ್ಯಾಸಕರು ತೆಗೆದುಕೊಂಡು ಹೋಗಿದ್ದಲ್ಲಿ ಅದನ್ನು ಕಾಲೇಜು ಮುಖ್ಯಸ್ಥರ ಸುಪರ್ಧಿಗೆ ನೀಡುವುದು ಸೂಕ್ತವೆಂದು ಭಾವಿಸಲಾಗಿದೆ. ಯಾವುದೇ ಕಾರಣಕ್ಕೂ ಪರೀಕ್ಷೆ ಮುಗಿಯುವವರೆಗೆ ಮೊಬೈಲ್‌ಗಳನ್ನು ಪರೀಕ್ಷೆ ಮೇಲ್ವಿಚಾರಕರಿಗೆ (Room Invigilation) ನೀಡಬಾರದೆಂದು ಸೂಚಿಸಿದೆ. ಸದರಿ ಮೊಬೈಲ್‌ಗಳನ್ನು ಒಂದು ಕಪಾಟಿನಲ್ಲಿಡಲು ಕಾಲೇಜಿನ ಒಬ್ಬ ಕಾರ್ಯ ನಿರ್ವಾಹಕರಿಗೆ ಸೂಚಿಸಲು ತಿಳಿಸಲಾಗಿದೆ. ಒಂದು ವೇಳೆ ಯಾವುದೇ ದೂರವಾಣಿ ಮೂಲಕ ಅಧಿಕಾರಿಗಳಿಗೆ ಅಥವಾ ಸ್ಥಳೀಯ ಅಧಿಕಾರಿಗಳಿಗೆ ಕೆಲಸದ ನಿಮಿತ್ತ ಮಾಡಬೇಕಾದಲ್ಲಿ ಅದನ್ನು ಅವರಿಂದ ಪಡೆದು ಒಂದು ಪ್ರತ್ಯೇಕ ವಹಿಯಲ್ಲಿ ನಮೂದಿಸಿ ಯಾವ ಕಾರ್ಯಕ್ಕೆ ಕೋರಿ ಹಾಗೂ ಯಾವ ಸ್ಥಳೀಯ ಟೆಲಿಫೋನ್ ಸಂಖ್ಯೆಗೆ ದೂರವಾಣಿ ಮಾಡಲಾಯಿತು ಎಂಬುದರ ಬಗ್ಗೆ ನಮೂದಿಸಿ ಮಾತು ಮುಗಿದ ನಂತರ ಕೂಡಲೇ ಅದನ್ನು ಕಚೇರಿಯ ನಿಯೋಜಿತ ಸಿಬ್ಬಂದಿಯ ಕೈಗೆ ಒಪ್ಪಿಸುವುದು. ಈ ನಿರ್ದೇಶನಗಳನ್ನು ಪಾಲಿಸದಿದ್ದಲ್ಲಿ ಹಾಗೂ ಮೊಬೈಲ್‌ಗಳನ್ನು ಪರೀಕ್ಷಾ ವೇಳೆಯಲ್ಲಿ ಬಳಸಿರುವುದು ಕಂಡುಬಂದಲ್ಲಿ ಅಂತಹ ಉಪನ್ಯಾಸಕರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು.

ಸಹಿ/-
ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಯನ್ನು:
ರಾಜ್ಯದ ಎಲ್ಲ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ ಹಾಗೂ ಜಂಟಿ ಮುಖ್ಯ ಅಧೀಕ್ಷಕರುಗಳಿಗೆ - ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು ಮಾಹಿತಿಗಾಗಿ:
ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ - ಸೂಕ್ತ ಕ್ರಮಕ್ಕಾಗಿ